RNU AIR DHARWAD

# OCTOBER 13, 2025

## AKASHAVANI - DHARWAD

## PRADESH SAMACHARA (KANNADA) 12.00 P.M.

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಪ್ರಧಾನಮಂತ್ರಿ ಧನ-ಧಾನ್ಯ ಯೋಜನೆ** ಹಾಗೂ ದ್ವಿದಳ ಧಾನ್ಯಗಳ ಸ್ವಾವಲಂಬಿ ಮಿಶನ್, ಕೃಷಿ ಕ್ಷೇತ್ರದ ಅಭಿವೃದ್ಧಿ ಗುರಿ ಹೊಂದಿದೆ. ಈ ಯೋಜನೆಗಳು ರೈತರಿಗೆ ಆರ್ಥಿಕ ಬಲ ನೀಡಲಿವೆ ಎಂದು ರಾಜ್ಯಸಭಾ ಸಂಸದ, ನಾರಾಯಣ ಸಾ ಭಾಂಡಗೆ ಹೇಳಿದರು. ಬಾಗಲಕೋಟೆಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರವು ಕೃಷಿ ಮೂಲಸೌಕರ್ಯ ನಿಧಿ ಯೋಜನೆಯಡಿ, ರೈತರ ಕೃಷಿ ಉತ್ಪಾದಕತೆಗೆ ಹೆಚ್ಚಿನ ಒತ್ತು ನೀಡಿ, ಗೋದಾಮು, ಸಂಸ್ಕರಣಾ ಘಟಕಗಳ ನಿರ್ಮಾಣ ಸೇರಿದಂತೆ, ಮಾರುಕಟ್ಟೆ ಮೂಲ ಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡುತ್ತಿದೆ ಎಂದರು.

<><><>

**ಸರ್ಕಾರವು ಬೇಡ್ತಿ-ವರದಾ ಹಾಗೂ** ಅಘನಾಶಿನಿ-ವೇದಾವರಿ ನದಿ ಜೋಡಣೆ ಯೋಜನೆಗಳ ತಯಾರಿ ಪ್ರಕ್ರಿಯೆ ನಿಲ್ಲಿಸಬೇಕು ಎಂದು, ಸ್ವರ್ಣವಲ್ಲಿ ಮಹಾಸಂಸ್ಥಾನ ಮಠದ ಶ್ರೀ ಗಂಗಾಧರೇಂದ್ರ ಸರಸ್ವತಿ ಸ್ವಾಮೀಜಿ ಆಗ್ರಹಿಸಿದ್ದಾರೆ. ಬೇಡ್ತಿ ಅಘನಾಶಿನಿ ಕೊಳ್ಳ ಸಂರಕ್ಷಣಾ ಸಮಿತಿ ವತಿಯಿಂದ, ನದಿ ಕಣಿವೆಗಳ ಹಳ್ಳಿಗಳಲ್ಲಿ, ನದಿ ಜೋಡಣೆ ಯೋಜನೆ ವಿರುದ್ಧ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. 2026, ಜನೆವರಿ 11 ರಂದು ಶಿರಸಿಯಲ್ಲಿ ಬೃಹತ್ ಜನ ಸಮಾವೇಶ ನಡೆಸಲಾಗುವುದು ಎಂದರು. ಶಿರಸಿ ಸೋಂದಾ ಸ್ವರ್ಣವಲ್ಲಿ ಸುಧರ್ಮ ಸಭಾಂಗಣದಲ್ಲಿ, ಬೇಡ್ತಿ ಅಘನಾಶಿನಿ ಕೊಳ್ಳ ಸಂರಕ್ಷಣಾ ಸಮಿತಿ ಪದಾಧಿಕಾರಿಗಳ ಸಭೆ ಜರುಗಿತು. ಶಾಲ್ಮಲಾ, ಪಟ್ಟಣದ ಹೊಳೆ, ಬೇಡ್ತಿ, ಅಘನಾಶಿನಿ ನದಿ ತೀರಗಳಲ್ಲಿ ರ್‍ಯಾಲಿ ಹಾಗೂ ಜಾಗೃತಿ ಸಭೆಗಳ ಆಯೋಜನೆಯ ದಿನಾಂಕಗಳನ್ನು ನಿರ್ಧರಿಸಲಾಯಿತು.

<><><><>

**ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿ** ‘ತ್ತು ಆಯೋಜಿಸಿದ ‘ನಾನು ವಿಜ್ಞಾನಿ – 2025’ ರಾಜ್ಯ ಮಟ್ಟದ ಪ್ರಥಮ ಟೆಲಿಸ್ಕೋಪ್ ತಯಾರಿ ತರಬೇತಿಯಲ್ಲಿ ಪಾಲ್ಗೊಂಡಿದ್ದ, ಬಳ್ಳಾರಿ ಜಿಲ್ಲೆ ವೀರಶೈವ ವಿದ್ಯಾವರ್ಧಕ ಶಾಲೆಯ ಐವರು ವಿದ್ಯಾರ್ಥಿಗಳು, ಜ್ಞಾನಾಮೃತ ಪ್ರೌಢಶಾಲೆ ಹಾಗೂ ನಂದ ರೆಸಿಡೆನ್ಸಿ ಶಾಲೆಯ ತಲಾ ಒಬ್ಬರು ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 7 ಜನ ವಿದ್ಯಾರ್ಥಿಗಳು ಪ್ರತಿಷ್ಠಿತ ‘ವರ್ಲ್ಡ್ ಆಫ್ ರೆಕಾರ್ಡ್ಸ್, ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್ ಮತ್ತು ಏ ್ಯಾ ಬುಕ್ ಆಫ್ ರೆಕಾರ್ಡ್ಸ್’ನಲ್ಲಿ ಸ್ಥಾನ ಪಡೆದಿದ್ದಾರೆ.

<><><>

**ಕರ್ನಾಟಕ ರಾಜ್ಯ ಹಿಂದುಳಿದ** ವರ್ಗಗಳ ಆಯೋಗದ ವತಿಯಿಂದ, ನಡೆಸಲಾಗುತ್ತಿರುವ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಕಾರ್ಯ ರಾಜ್ಯಾದ್ಯಂತ ಪ್ರಗತಿಯಲ್ಲಿದೆ. ಉತ್ತರ ಕನ್ನಡ ಜಿಲ್ಲೆಯಲ್ಲಿ, ಇದುವರೆಗೆ ವರೆಗೆ 3 ಲಕ್ಷದ 33 ಸಾವಿರದ 843 ಮನೆಗಳ ಸಮೀಕ್ಷೆ ಪೂರ್ಣಗೊಳಿಸಲಾಗಿದ್ದು, ಶೇಕಡ 99 ದಶಾಂಶ 9,0 ಪ್ರಗತಿ ಸಾಧಿಸಲಾಗಿದೆ ಎಂದು ಜಿಲ್ಲಾಡಳಿತ ತಿಳಿಸಿದೆ.

<><><>

**ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ** ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ವತಿಯಿಂದ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ, ರಾಷ್ಟ್ರೀಯ ಸಂಗೀತ ನೃತ್ಯ ಮಹೋತ್ಸವ ಹಾಗೂ ‘ಕವಿಯ ನೋಡಿ-ಕವಿತೆ ಕೇಳಿ’ ಕಾರ್ಯಕ್ರಮ ಆಯೋಜಿಸಲಾಯಿತು. ಕರ್ನಾಟಕ

ಸಂಗೀತ ನೃತ್ಯ ಅಕಾಡೆಮಿ ಅಧ್ಯಕ್ಷರಾದ ಶುಭ ಧನಂಜಯ ಮಾತನಾಡಿ, ಸಂಗೀತ ಮಹೋತ್ಸವದಂತಹ ಕಾರ್ಯಕ್ರಮಗಳು ಯಶಸ್ವಿಯಾಗಿ ನಡೆಯಲು, ಕಲಾ ಜಗತ್ತಿನ ಹಿರಿಯ ಕಲಾವಿದರ ಸಹಕಾರ ನಿರಂತರವಾಗಿದೆ ಎಂದರು.

<><><>

**ಕನ್ನಡ ಭಾಷೆ, ನೆಲ, ಜಲ ಸೇರಿದಂತೆ** ಸಾಂಸ್ಕೃತಿಕ ಹಿತಾಸಕ್ತಿ ಕಾಪಾಡುವ ಉದ್ದೇಶದಿಂದ ಬೆಳಗಾವಿಯಲ್ಲಿ ಆರಂಭಗೊಂಡ, ರಾಜ್ಯಮಟ್ಟದ ದೀಕ್ಷಾ ಅಭಿಯಾನಕ್ಕೆ, ಕನ್ನಡ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷರಾದ ನಾರಾಯಣ ಗೌಡ ಚಾಲನೆ ನೀಡಿದರು. ಸಾವಿರಾರು ಕಾರ್ಯಕರ್ತರು ಪಾಲ್ಗೊಂಡಿದ್ದರು.

<><><>

**ರಾಷ್ಟ್ರೀಯ ಸ್ವಯಂಸೇವಕ ಸಂಘದ** 100 ನೇ ವರ್ಷಾಚರಣೆ ಅಂಗವಾಗಿ, ಧಾರವಾಡ ನಗರ ಘಟಕದಿಂದ, ವಿಜಯದಶಮಿ ಉತ್ಸವ ಹಾಗೂ ಪಥಸಂಚಲನ ಜರುಗಿತು. ಕರ್ನಾಟಕ ಮಹಾವಿದ್ಯಾಲಯದ ಮೈದಾನದಲ್ಲಿ ಆಯೋಜಿಸಲಾದ, ವೇದಿಕೆ ಕಾರ್ಯಕ್ರಮದಲ್ಲಿ, ಆರ್.ಎಸ್.ಎಸ್, ಉತ್ತರ ಕರ್ನಾಟಕ ಪ್ರಾಂತ ಬೌದ್ಧಿಕ ಪ್ರಮುಖ ದುರ್ಗಣ್ಣ ಅವರು ಮಾತನಾಡಿ– ಪಾಶ್ಚಿಮಾತ್ಯ ಸಂಸ್ಕೃತಿ ಅನುಕರಣೆಯಿಂದ ಹೊರಬಂದು, ಹಿಂದೂ ಸಮಾಜವು ಏಳಿಗೆ ಹಾಗೂ ಉನ್ನತಿಗೆ ಶ್ರಮಿಸಬೇಕು. ಸಂಸ್ಕೃತಿ, ಸಂಸ್ಕಾರ ಬೆಳೆಸುವತ್ತ ಕಾರ್ಯೋನ್ಮುಖವಾಗಬೇಕು ಎಂದರು.

<><><>

**ಕಲಬುರಗಿ ಕಪನೂರು ಹಾಗೂ ನಂದೂರ** ಕೈಗಾರಿಕಾ ಪ್ರದೇಶಗಳಲ್ಲಿ ನಿರ್ಮಾಣಗೊಂಡಿರುವ, ಶ್ರಮಿಕ ತಾತ್ಕಾಲಿಕ ವಸತಿ ಸಮುಚ್ಚಯಗಳ ಉದ್ಘಾಟನೆ ಹಾಗೂ ಅಸಂಘಟಿತ ವಲಯಗಳ, ಕಾರ್ಮಿಕರಿಗೆ ಸ್ಮಾರ್ಟ್ ವಿತರಣೆ ಕಾರ್ಯಕ್ರಮ ನಾಳೆ ಬೆಳಗ್ಗೆ 11 ಗಂಟೆಗೆ, ಕೋಟನೂರು ಜೇವರ್ಗಿ ರಸ್ತೆಯ ಸಿದ್ಧಶ್ರೀ ಡಿವೈನ್ ಪಾರ್ಕ್ ನಲ್ಲಿ ಆಯೋಜಿತವಾಗಿದೆ.

<><><>

**ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಾಣಿಜ್ಯ** ಬೆಳೆಯನ್ನು ಹೆಚ್ಚು ಬೆಳೆಯಲಾಗುತ್ತಿದ್ದು, ಕೃಷಿಕರು ವಾಣಿಜ್ಯ ಬೆಳೆಯ ಜೊತೆಗೆ ಆಹಾರ ಬೆಳೆಗಳನ್ನು ಹೆಚ್ಚು ಬೆಳೆಯಬೇಕು ಎಂದು ಜಿಲ್ಲಾ ಕೃಷಿ ಇಲಾಖೆಯ ಉಪನಿರ್ದೇಶಕ ಶಿವಶಂಕರ ದಾನಗೊಂಡರ್ ಸಲಹೆ ನೀಡಿದ್ದಾರೆ. ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಮತ್ತು ಕೃಷಿ ಇಲಾಖೆ ವತಿಯಿಂದ, ಸುಳ್ಯ ತಾಲೂಕಿನಲ್ಲಿ ಜರುಗಿದ, ಪ್ರಧಾನಮಂತ್ರಿ ಧನ ಧಾನ್ಯ ಕೃಷಿ ಯೋಜನೆಯ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>